**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ್ ಕೆ ರಾಥೋಡ್ ರವರು ನಿಯಮ 330 ರಡಿಯಲ್ಲಿ ಮಂಡಿಸಿರುವ ಸೂಚನಾ ಪತ್ರಕ್ಕೆ ಉತ್ತರ**

## ವಿಷಯ

ರಾಜ್ಯದಲ್ಲಿರುವ ಖಾಸಗಿ ಶಾಲೆಗಳಲ್ಲಿ ಕೇಂದ್ರ ಪಠ್ಯಕ್ರಮವಾದ CBSE ಮತ್ತು ICSE ಯ ಪಠ್ಯಕ್ರಮಗಳನ್ನು ಭೋದಿಸಲು ರಾಜ್ಯದ ಶಿಕ್ಷಣ ಇಲಾಖೆಯಿಂದ NOC ಪತ್ರಗಳನ್ನು ಪಡೆದು ಮಾನ್ಯತೆಯನ್ನು ಪಡೆಯಬೇಕಾಗಿರುತ್ತದೆ. ಆದರೆ, ಕೇಂದ್ರ ಪಠ್ಯಕ್ರಮವನ್ನು ಶಾಲೆಗಳಲ್ಲಿ ಭೋದಿಸಲು ರಾಜ್ಯದ ಶಿಕ್ಷಣ ಇಲಾಖೆಯಿಂದ ಎನ್.ಓ.ಸಿ. ಪತ್ರಗಳನ್ನು ಪಡೆಯಲು ಸಾಧ್ಯವಾಗದೇ ಇರುವ ಶಾಲೆಗಳ ಆಡಳಿತ ಮಂಡಳಿಯವರು ನಕಲು ಎನ್.ಓ.ಸಿ. ಪತ್ರಗಳನ್ನು ನೀಡಿ ಕೇಂದ್ರ ಪಠ್ಯಕ್ರಮವನ್ನು ಅಳವಡಿಸಿಕೊಂಡು ಸರ್ಕಾರಕ್ಕೆ ಹಾಗೂ ವಿದ್ಯಾರ್ಥಿಗಳಿಗೆ ಮೋಸಮಾಡುತ್ತಿರುವುದು ಅತ್ಯಂತ ಶೋಚನೀಯ ಸಂಗತಿಯಾಗಿ.

ಅಕ್ರಮವಾಗಿ ನಕಲು ಪತ್ರಗಳನ್ನು ನೀಡಿ ಕೇಂದ್ರ ಪಠ್ಯಕ್ರಮವನ್ನು ಅಳವಡಿಸಿಕೊಂಡು ಸರ್ಕಾರಕ್ಕೆ ಹಾಗೂ ವಿದ್ಯಾರ್ಥಿಗಳಿಗೆ ಮೋಸಮಾಡುತ್ತಿರುವ ಶಾಲೆಗಳ ಆಡಳಿತ ಮಂಡಳಿಯ ವಿರುದ್ಧ ಸರ್ಕಾರವು ಸೂಕ್ತಕ್ರಮವನ್ನು ವಹಿಸಿ, ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬದಲಿ ವ್ಯವಸ್ಥೆಯನ್ನು ಮಾಡಿ, ಈ ಅಕ್ರಮಕ್ಕೆ ಸಹಕರಿಸಿದ ಸರ್ಕಾರದ ಅಧಿಕಾರಿಗಳ ವಿರುದ್ಧ ಸೂಕ್ತಕ್ರಮವನ್ನು ವಹಿಸುವ ಬಗ್ಗೆ.

## ಉತ್ತರ

ಯಾವುದೇ ಒಂದು ಖಾಸಗಿ ಶಾಲಾ ಮಂಡಳಿಯು ಶಾಲೆಯನ್ನು ಪ್ರಾರಂಭಿಸಲು ಇಚ್ಛಿಸಿದ್ದಲ್ಲಿ ಕರ್ನಾಟಕ ಶಿಕ್ಷಣ ಕಾಯಿದೆ- 1983ರ ಕಲಂ 30, 31 ರಂತೆ ನೋಂದಣಿಯಾಗಿ, ರಾಜ್ಯ ಪಠ್ಯಕ್ರಮದಲ್ಲಿ ಶಾಲೆ ನಡೆಸಬೇಕು. ನಂತರ ಆ ಶಾಲಾ ಆಡಳಿತ ಮಂಡಳಿಯು ಕೇಂದ್ರ ಪಠ್ಯಕ್ರಮ ಸಂಯೋಜನೆಯನ್ನು ಹೊಂದಲು ಇಚ್ಛಿಸಿದ್ದಲ್ಲಿ ಸರ್ಕಾರದ ಆದೇಶ ಸಂಖ್ಯೆ:ಇಡಿ 126 ಪಿಜಿಸಿ 2002, ದಿನಾಂಕ:10-12-2002 ರಂತೆ ಪ್ರಸ್ತಾವನೆಯನ್ನು ಸಂಬಂಧಪಟ್ಟ ಆಯಾ ಜಿಲ್ಲಾ ಉಪನಿರ್ದೇಶಕರ ಮುಖಾಂತರ ಸರ್ಕಾರಕ್ಕೆ ಸಲ್ಲಿಸಬೇಕು. ಇಂತಹ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ನಿರಾಕ್ಷೇಪಣಾ ಪತ್ರವನ್ನು ನೀಡಲಾಗುತ್ತಿದೆ. ಈ ರೀತಿ ಪಡೆದ ನಿರಾಕ್ಷೇಪಣಾ ಪತ್ರದ ಆಧಾರದ ಮೇಲೆ ಶಾಲಾ ಆಡಳಿತ ಮಂಡಳಿಗಳು ಸಂಬಂಧಪಟ್ಟ ಕೇಂದ್ರ ಶಿಕ್ಷಣ ಮಂಡಳಿಯಿಂದ ಸಂಯೋಜನೆಯನ್ನು ಪಡೆದು, ಬೋಧಿಸಬೇಕಾಗಿರುತ್ತದೆ.

ಆದರೆ ಕೆಲವೊಂದು ಶಾಲೆಗಳು ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪತ್ರ ಪಡೆಯದೆ ನಕಲು ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸಿ, ನೇರವಾಗಿ ಕೇಂದ್ರ ಪಠ್ಯಕ್ರಮ ಸಂಯೋಜನೆಯನ್ನು ಪಡೆದು ಬೋಧಿಸುತ್ತಿರುವ ಒಂದು ಪ್ರಕರಣವು (Sandepini International Recidential School) ಕಂಡುಬಂದಿದ್ದು, ಅಂತಹ ಶಾಲೆಯ ವಿರುದ್ಧ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಕಲಂ 123ರಡಿಯಲ್ಲಿ ಎಂ.ಎಸ್. ಬಿಲ್ಡಿಂಗ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ, ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ.

**ಸಂಖ್ಯೆ: ಇಪಿ 72 ಪಿಜಿಸಿ 2023**

**(ಬಿ.ಸಿ. ನಾಗೇಶ್)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ
ಸಚಿವರು.